**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ:ಸಿ7[2]ಪ್ರಾಶಿಅ.ಹೊ.ಶಾ.ನೋಂ.01/2021-22 ದಿನಾಂಕ:28ನೇ ಡಿಸೆಂಬರ್ 2021

*: ಸುತ್ತೋಲೆ :*

ವಿಷಯ: 2021-22ನೇ ಸಾಲಿನಲ್ಲಿ ಹೊಸದಾಗಿ ಶಾಶ್ವತ ಅನುದಾನ ರಹಿತ ಶಾಲೆಗಳನ್ನು ಪ್ರಾರಂಭಿಸಲು ನೋಂದಾಯಿಸಲು ಸಲ್ಲಿಸಿದ ಅರ್ಜಿಗಳಲ್ಲಿ ತಿರಸ್ಕೃತಗೊಂಡ ಅರ್ಜಿಗಳಿಗೆ ಪುನರ್ ಸಲ್ಲಿಸಲು ಕಾಲಾವಕಾಶ ಕಲ್ಪಿಸಿದ್ದು, ಸದರಿ ಅರ್ಜಿಗಳನ್ನು ಪುನರ್ ಪರಿಶೀಲಿಸಲು ಅವಕಾಶ ನೀಡುವ ಬಗ್ಗೆ.

ಉಲ್ಲೇಖ: 1) ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ:29-06-2021.
2) ಸರ್ಕಾರದ ಆದೇಶ ಸಂಖ್ಯೆ:ಇಪಿ.374.ಪಿಜಿಸಿ.2021, ದಿನಾಂಕ:03-12-2021
3) ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿ:3-12-2021 ಮತ್ತು 23.12.2021

*****

2021-22ನೇ ಶೈಕ್ಷಣಿಕ ಸಾಲಿನಲ್ಲಿ ಖಾಸಗಿ ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಉದ್ದೇಶಿಸಿರುವ ಸಂಸ್ಥೆಗಳು ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಗಳನ್ನು ತಿರಸ್ಕರಿಸಿದ್ದು, ಸದರಿ ಅರ್ಜಿಗಳನ್ನು ಪುನರ್ ಸಲ್ಲಿಸಲು ದಿನಾಂಕ:07.01.2022ರ ವರೆಗೆ ಅವಕಾಶ ಕಲ್ಪಿಸಿದೆ. ಈ ಮಧ್ಯೆ ಅನೇಕ ಆಡಳಿತ ಮಂಡಳಿಗಳು ಮನವಿ ಸಲ್ಲಿಸಿ, ತಂತ್ರಾಂಶದಲ್ಲಿ ದಾಖಲೆಗಳನ್ನು ಅಪ್‌ಲೋಡ್ ಮಾಡುವಾಗ ದಾಖಲೆಗಳನ್ನು ನಿಖರವಾಗಿ ಅಪ್‌ಲೋಡ್ ಮಾಡಲು ಸಾಧ್ಯವಾಗಿಲ್ಲವಾದ್ದರಿಂದ ಪುನಃ ದಾಖಲೆಗಳನ್ನು ಅಪ್‌ಲೋಡ್ ಮಾಡಲು ಅವಕಾಶ ನೀಡಬೇಕೆಂದು ಕೋರಿದ್ದು, ಈ ಬಗ್ಗೆ ಪರಿಶೀಲಿಸಿ, ಅಂತಿಮ ಅವಕಾಶವೆಂದು ಪರಿಗಣಿಸಿ, ಈ ಕೆಳಕಂಡಂತೆ ಅವಕಾಶ ಕಲ್ಪಿಸಿದೆ.

ಈಗಾಗಲೇ 2021-22ನೇ ಸಾಲಿಗೆ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳಲ್ಲಿ ಹೆಚ್ಚುವರಿ ಮಾಹಿತಿಗಳನ್ನು ಅಪ್ ಲೋಡ್ ಮಾಡಲು ಅಥವಾ ಮಾಹಿತಿಗಳನ್ನು ಸರಿಯಾಗಿ ಅಪ್ ಲೋಡ್ ಮಾಡದೇ ಸಲ್ಲಿಸಿದ ಅರ್ಜಿಗಳನ್ನು ಆಡಳಿತ ಮಂಡಳಿಗಳು ಹಿಂಪಡೆದು ಸರಿಪಡಿಸಿ ಸಲ್ಲಿಸಲು [Re call] ಇಚ್ಛಿಸಿದಲ್ಲಿ ಆಡಳಿತಮಂಡಳಿ ಹಿಂಪಡೆದು ಸರಿಪಡಿಸಿ ಸಲ್ಲಿಸಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಿದೆ. ಈ ಅವಕಾಶವನ್ನು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾದ 07-01-2022 ರವರೆಗೆ ಮಾತ್ರ ಅವಕಾಶ ನೀಡಿದ್ದು ಮತ್ತೊಮ್ಮೆ ಈ ಸೌಲಭ್ಯ ಇರುವುದಿಲ್ಲ. ಆದ್ದರಿಂದ ಆಡಳಿತ ಮಂಡಳಿಗಳು ಈ ಸೌಲಭ್ಯವನ್ನು ಉಪಯೋಗಿಸಿಕೊಂಡು ಎಲ್ಲಾ ಮಾಹಿತಿಗಳನ್ನು ಸಮರ್ಪಕವಾಗಿ/ನಿಖರವಾಗಿ ತಂತ್ರಾಂಶದಲ್ಲಿ ದಾಖಲಿಸಲು/ಅಪ್‌ಲೋಡ್ ಮಾಡಲು ಸೂಚಿಸಿದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.

*ಇವರಿಗೆ:*

*01.* ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು[ಆಡಳಿತ] ರವರಿಗೆ

*02.* ರಾಜ್ಯದ ಎಲ್ಲಾ ತಾಲ್ಲೂಕು/ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ

**ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:-**

*01.* ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ ಮತ್ತು ಧಾರವಾಡ

*02.* ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ, ಕರ್ನಾಟಕ, ಬೆಂಗಳೂರು

*03.* ನಿರ್ದೇಶಕರು, (ಕಾರ್ಯಕ್ರಮ) ಸಮಗ್ರ ಶಿಕ್ಷಣ, ಕರ್ನಾಟಕ, ಬೆಂಗಳೂರು

*04.* ಹಿರಿಯ ಕಾರ್ಯಕ್ರಮಾಧಿಕಾರಿಗಳು, ಎಸ್.ಎ.ಟಿ.ಎಸ್ ವಿಭಾಗ, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು

*05.* ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ ಕಳುಹಿಸುತ್ತಾ ಇಲಾಖಾ ವೆಬ್‌ಸೈಟ್‌ನ ಸುತ್ತೋಲೆ ವಿಭಾಗದಲ್ಲಿ ಪ್ರಕಟಿಸಲು ಸೂಚಿಸಿದೆ.

*06.* ಪ್ರೋಗ್ರಾಮರ್, ಸಾಫ್ಟ್‌ವೇರ್ ಡೆವಲಪ್ ಮೆಂಟ್ ಸೆಂಟರ್, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು. ಇವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

*07.* ಕಛೇರಿ ಪ್ರತಿ.